# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಜಿ.ಡಿ.ಜೋಷಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ನವಲಗುಂದ ಇವರ ವಿರುದ್ಧದ ಇಲಾಖಾ ವಿಚಾರಣೆ

ಓದಲಾಗಿದೆ:- 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ ಇವರ ಪತ್ರ ಸಂಖ್ಯೆ:ದಾಜಿಪಂ/ಉಕಾ/ಸಿ-9/ಸಿಆರ್/62/2011-12/283, ದಿನಾಂಕ: 02.05.2012

2. ಸರ್ಕಾರದ ಸಮ ಸಂಖ್ಯೆಯ ಕಾರಣ ಕೇಳುವ ನೋಟೀಸ್ ದಿನಾಂಕ:25.11.2013

3. ನಿಮ್ಮ ಲಿಖಿತ ಹೇಳಿಕೆ ದಿನಾಂಕ: 04.12.2013

4. ಮು.ಕಾ.ನಿ.ಅ.ಜಿಪಂ. ಧಾರವಾಡ ಇವರ ಪತ್ರ ಸಂಖ್ಯೆ:ಧಾಜಿಪಂ./ ಉಕಾ/ಸಿಆರ್/2015-16/1358, ದಿನಾಂಕ; 28.07.2015

****

ಪ್ರಸ್ತಾವನೆ:

ಧಾರವಾಡ ಜಿಲ್ಲೆ ನವಲಗುಂದ ತಾಲ್ಲೂಕು ಪಂಚಾಯತಿಯಲ್ಲಿ ಈ ಹಿಂದೆ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಧಾರವಾಡ ಜಿಲ್ಲೆಯ ನವಲಗುಂದ ತಾಲ್ಲೂಕಿನ ಭದ್ರಾಪುರ ಗ್ರಾಮ ಪಂಚಾಯತ್ ವ್ಯಾಪ್ತಿಯ ಸೈದಾಪುರ ಗ್ರಾಮದಲ್ಲಿ ದಿನಾಂಕ:06.03.2012 ರಂದು ಆಯೋಜಿಸಲಾಗಿದ್ದ ನೂತನವಾಗಿ ನಿರ್ಮಾಣವಾಗುವ ಬಸವೇಶ್ವರ ಸಮುದಾಯ ಭವನ ಮತ್ತು ಮಾರಾಟ ಮಳಿಗೆಗಳ ಅಡಿಗಲ್ಲು ಸಮಾರಂಭದ ಆಮಂತ್ರಣ ಪತ್ರಿಕೆಯಲ್ಲಿ ಚುನಾಯಿತ ಪ್ರತಿನಿಧಿಗಳನ್ನು ಪಕ್ಷದ ಆಧಾರದಲ್ಲಿ ವಿಂಗಡಿಸಿ ಆಮಂತ್ರಣ ಪತ್ರಿಕೆ ಮುದ್ರಿಸಿ ಶಿಷ್ಟಾಚಾರ ಉಲ್ಲಂಘಿಸಿರುವ ಬಗ್ಗೆ ಮಾನ್ಯ ವಿಧಾನ ಪರಿಷತ್ ಸದಸ್ಯರು ಹಾಗೂ ಮಾಜಿ ಶಿಕ್ಷಣ ಸಚಿವರಾದ ಶ್ರೀ ಬಸವರಾಜ್ ಹೊರಟ್ಟಿ ಇವರು ದೂರನ್ನು ನೀಡಿದ್ದರನ್ವಯ ಈ ರೀತಿಯ ಕೃತ್ಯವು ಶಿಷ್ಟಾಚಾರದ ಉಲ್ಲಂಘನೆಯಾಗಿದ್ದ ಕಾರಣ, ಶ್ರೀ ಜಿ.ಡಿ.ಜೋಷಿ, ಇವರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳುವಂತೆ ಮೇಲೆ (1) ರಲ್ಲಿ ಓದಲಾದ ಪತ್ರದಲ್ಲಿ ಧಾರವಾಡ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರು ಸಲ್ಲಿಸಿದ್ದ ಪ್ರಸ್ತಾವನೆಯನ್ನಾಧರಿಸಿ, ಸದರಿ ಅಧಿಕಾರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 12ರ ಪ್ರಕಾರ ಮೇಲೆ (2)ರಲ್ಲಿ ಓದಲಾದ ದಿನಾಂಕ:25.11.2013ರಂದು ಕಾರಣ ಕೇಳುವ ನೋಟೀಸ್ಸಿನ್ನು ಜಾರಿಮಾಡಲಾಗಿತ್ತು. ದಿನಾಂಕ: 25.11.2013 ರಂದು ಜಾರಿಮಾಡಲಾಗಿದ್ದ ಕಾರಣ ಕೇಳುವ ನೋಟಿಸಿಗೆ ಶ್ರೀ ಜಿ.ಡಿ.ಜೋಷಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ಇವರು ಮೇಲೆ (3) ರಲ್ಲಿ ಓದಲಾದ ತಮ್ಮ ಲಿಖಿತ ರಕ್ಷಣಾ ಹೇಳಿಕೆಯಲ್ಲಿ ಈ ಕೆಳಕಂಡಂತೆ ತಿಳಿಸುತ್ತಾ, ತಮ್ಮ ವಿರುದ್ದದ ಶಿಸ್ತು ಕ್ರಮವನ್ನು ಕೈಬಿಟ್ಟು, ಪ್ರಕರಣವನ್ನು ಮುಕ್ತಾಯಗೊಳಿಸುವಂತೆ ಕೋರಿರುತ್ತಾರೆ.

i) ದಿನಾಂಕ: 06-03-2012 ರಂದು ಸೈದಾಪೂರ ಗ್ರಾಮದ ಕಾಮಗಾರಿಗಳ ಅಡಿಯಲ್ಲಿ ಸಮಾರಂಭದ ಆಮಂತ್ರಣ ಪತ್ರಿಕೆಯನ್ನು ನಮ್ಮ ಗಮನಕ್ಕೆ ತರದೇ ಮುದ್ರಿಸಿದ್ದಾರೆ. ಗ್ರಾಮ ಪಂಚಾಯತ ಕಮಿಟಿ, ಕಾರ್ಯದರ್ಶಿಗಳು ನಿರ್ಣಯಿಸಿ ಮುದ್ರಿಸಿ ನಮ್ಮ ಕಛೇರಿಗೆ ಆಗಮಿಸಿ ಪತ್ರಿಕೆ ನನಗೆ ತಲುಪಿದಾಗ ಈ ಕುರಿತು ನಮಗೆ ತಿಳಿಸದೇ ಮುದ್ರಿಸಿರುವ ಕುರಿತು ನಾನು ಅಪೇಕ್ಷಿಸಿದ್ದಿರುತ್ತದೆ.

ii) ಸದರಿ ಸಮಾರಂಭದ ಆಮಂತ್ರಣ ಪತ್ರಿಕೆ ಮುದ್ರಿಸಿ ಶಿಷ್ಟಾಚಾರ ಉಲ್ಲಂಘನೆ ಮಾಡುವಲ್ಲಿ ನನ್ನದೇನು ಪಾತ್ರವಿರುವುದಿಲ್ಲ. ಅಲ್ಲದೇ ಸದರ ಆಮಂತ್ರಣ ಪತ್ರಿಕೆ ಮುದ್ರಿಸುವಾಗ ನನ್ನನ್ನು ಯಾರೂ ಸಂಪರ್ಕಿಸಿರುವುದಿಲ್ಲ.

iii) ಸಮಾರಂಭದ ಆಮಂತ್ರಣ ಪತ್ರಿಕೆಯಲ್ಲಿನ ಶಿಷ್ಟಾಚಾರದ ಉಲ್ಲಂಘನೆ ಸಂಬಂಧ ಭದ್ರಾಪುರ ಗ್ರಾಮ ಪಂಚಾಯತಿಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಕೆ.ಸಿ ಬಾಳಿಕಾಯಿ, ಇವರಿಗೆ ಕಾರಣ ಕೇಳುವ ನೋಟೀಸ್‌ನ್ನು ಜಾರಿಮಾಡಿದ್ದು, ಈ ಸಂಬಂಧ ಇವರು ನೀಡಿರುವ ಉತ್ತರದಲ್ಲಿ ಈ ಕುರಿತಾದ ಅಚಾತುರ್ಯಕ್ಕೆ ಕ್ಷಮೆಯಾಚಿಸಿದ್ದಾರೆ. ಅಲ್ಲದೇ ಸದರಿಯವರು ಸಯದಾಪೂರ ಗ್ರಾಮದ ಗುರುಹಿರಿಯರು ಸದಸ್ಯರು ಮತ್ತು ಭದ್ರಾಪೂರ ಗ್ರಾಮ ಪಂಚಾಯತಿಯ ಅಧ್ಯಕ್ಷರು, ಉಪಾಧ್ಯಕ್ಷರು ಸದರ ಸಮಾರಂಭದ ಆಮಂತ್ರಣ ಪತ್ರಿಕೆ ತಯಾರಿಸಿದ್ದಾರೆ. ನನಗೂ ಸಹಿತ ಇದರ ಬಗ್ಗೆ ಪರಿಪೂರ್ಣ ಮಾಹಿತಿ ಇಲ್ಲದಿರುವುದರಿಂದ ಪ್ರಮಾದವಾಗಿರುವುದಾಗಿ ವಿನಂತಿಸಿರುತ್ತಾರೆ.

ನವಲಗುಂದ ತಾಲ್ಲೂಕು ಪಂಚಾಯತ್‌ನ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ ಜಿ.ಡಿ.ಜೋಷಿ, ಇವರು ದಿನಾಂಕ: 04.12.2013 ರಂದು ನೀಡಿದ್ದ ಲಿಖಿತ ಹೇಳಿಕೆ/ಸಮಜಾಯಿಷಿಯ ಬಗ್ಗೆ ಧಾರವಾಡ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರು ಮೇಲೆ (4) ರಲ್ಲಿ ಓದಲಾದ ಪತ್ರದಲ್ಲಿ. **"ಇನ್ನು ಮುಂದೆ ಈ ರೀತಿ ವರ್ತಿಸಬಾರದೆಂದು ಸಿ.ಸಿ.ಎ.ನಿಯಮಾವಳಿಗಳ ಪ್ರಕಾರ ಅಧಿಕಾರಿಗೆ ಎಚ್ಚರಿಕೆ ನೀಡಿ ಪ್ರಕರಣವನ್ನು ಮುಕ್ತಾಯಗೊಳಿಸಬಹುದು."** ಎಂದು ಅಭಿಪ್ರಾಯ ವ್ಯಕ್ತಪಡಿಸಿರುತ್ತಾರೆ

ಶ್ರೀ ಜಿ.ಡಿ.ಜೋಷಿ, ಇವರು ನೀಡಿರುವ ಲಿಖಿತ ರಕ್ಷಣಾ ಹೇಳಿಕೆ, ಧಾರವಾಡ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರ ಅಭಿಪ್ರಾಯ ಹಾಗೂ ಇನ್ನಿತರೆ ಸಂಬಂಧಪಟ್ಟ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿದೆ. ಸದರಿ ಅಧಿಕಾರಿಯು ಎಸಗಿರುವ ಲೋಪಕ್ಕೆ ಅನುಗುಣವಾಗಿ ದಂಡನೆಯನ್ನು ವಿಧಿಸಲು ಸರ್ಕಾರವು ತೀರ್ಮಾನಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 104 ಪಬವ 2014 ಬೆಂಗಳೂರು ದಿನಾಂಕ: 31-10-2015**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಧಾರವಾಡ ಜಿಲ್ಲೆ ನವಲಗುಂದ ತಾಲ್ಲೂಕು ಪಂಚಾಯತ್‌ನ ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಶ್ರೀ ಜಿ.ಡಿ.ಜೋಷಿ, (ಪ್ರಸ್ತುತ ಸ್ಥಳ ನಿರೀಕ್ಷಣೆ) ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು-1957ರ ನಿಯಮ-8(ii) ರಲ್ಲಿ ನಿರ್ದಿಷ್ಟಪಡಿಸಿರುವ **"ವಾಗ್ದಂಡನೆ"** ದಂಡನೆಯನ್ನು ಸರ್ಕಾರವು ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

(ವಿ.ಹನುಮಂತಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ,**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಲೋಕೋಪಯೋಗಿ, ಇಲಾಖೆ,
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಧಾರವಾಡ
4. ಸರ್ಕಾರ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಅಪ ಇಲಾಖೆ, ಸೇವೆಗಳು-ಎ ಶಾಖೆ
6. ಸಂಬಂಧಿಸಿದ ಅಧಿಕಾರಿಗೆ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ ಉಪ ಕಾರ್ಯದರ್ಶಿ (ಆಡಳಿತ-2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.